ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 21 ನೇ ಸೆಪ್ಟೆಂಬರ್, 2020

ಹಾಸನ ಜಿಲ್ಲೆಯಲ್ಲಿ ಕೋವಿಡ್-19 ನಿಯಂತ್ರಣಕ್ಕೆ ಕೈಗೊಂಡಿರುವ ಕ್ರಮಗಳ ಕುರಿತು

ಶ್ರೀ ಎಂ. ಎ. ಗೋಪಾಲಸ್ವಾಮಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

28 (80) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಹಾಸನ ಜಿಲ್ಲೆಯಲ್ಲಿ ದಿನಾಂಕ : 31-08-2020ರವರೆಗೆ ಎಷ್ಟು ಜನರಿಗೆ ಕೋವಿಡ್-19 ಪರೀಕ್ಷೆ ಮಾಡಲಾಗಿದೆ; ಇದರಲ್ಲಿ ಎಷ್ಟು ಪಾಸಿಟಿವ್ ಪ್ರಕರಣಗಳು ಕಂಡು ಬಂದಿವೆ; ಎಷ್ಟು ಜನರಿಗೆ ಸರ್ಕಾರದಿಂದ ಚಿಕಿತ್ಸೆ ನೀಡಲಾಗಿದೆ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಹಾಸನ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಕೋವಿಡ್-19 ಆಸ್ಪತ್ರೆ, ಫಿವರ್ ಕ್ಲಿನಿಕ್ ಮತ್ತು ಕೋವಿಡ್-19 ನಿರ್ವಹಣಾ ಕೇಂದ್ರಗಳು ಯಾವುವು; ಈ ಕೇಂದ್ರಗಳಲ್ಲಿರುವ ಚಿಕಿತ್ಸಾ ವ್ಯವಸ್ಥೆಗಳೇನು ಮತ್ತು ಎಷ್ಟು ಜನರಿಗೆ ಚಿಕಿತ್ಸೆ ನೀಡಬಹುದಾಗಿದೆ; (ಕೇಂದ್ರವಾರು ವಿವರ ನೀಡುವುದು)

(ಇ) ಕೋವಿಡ್-19 ನಿಯಂತ್ರಣಕ್ಕಾಗಿ ಹಾಸನ ಜಿಲ್ಲೆಗೆ ಯಾವ ಯಾವ ಉಪಕರಣಗಳನ್ನು ಮತ್ತು ಅವಶ್ಯ ಪರಿಕರಗಳನ್ನು ಖರೀದಿಸಲಾಗಿದೆ ಮತ್ತು ಇವುಗಳ ವೆಚ್ಚದ ವಿವರಗಳೇನು; ಇವುಗಳನ್ನು ಯಾವ ಕೇಂದ್ರಗಳಲ್ಲಿ ಬಳಕೆ ಮಾಡಲಾಗುತ್ತಿದೆ; (ಸಂಪೂರ್ಣ ವಿವರ ನೀಡುವುದು)

(ಈ) ಕೋವಿಡ್-19 ನಿಯಂತ್ರಣಕ್ಕಾಗಿ ದಿನಾಂಕ : 31-08-2020 ರವರೆಗೆ ಹಾಸನ ಜಿಲ್ಲೆಗೆ ಬಿಡುಗಡೆಯಾಗಿರುವ ಅನುದಾನವೆಷ್ಟು ಮತ್ತು ಖರ್ಚಾಗಿರುವ ಅನುದಾನವೆಷ್ಟು? (ಸಂಪೂರ್ಣ ವಿವರ ನೀಡುವುದು)